# ಹಳಿಯಾಳ: ಕೈಗಾರಿಕಾ, ವೃತ್ತಿ ಕೌಶಲ್ಯಗಳ ಕಾರ್ಯಕ್ರಮ ಯಶಸ್ವಿ



● **ತತ್ವನಿಷ್ಠ, ಹಳಿಯಾಳ:** ವಿದ್ಯಾರ್ಥಿಗಳ ಚಿಂತನೆಗಳು ಕೇವಲ ಪಠ್ಯಕ್ರಮಗಳಿಗಷ್ಟೇ ಸೀಮಿತವಾಗದೆ, ಕೈಗಾರಿಕಾ ವಲಯದಲ್ಲಿನ ತಾಂತ್ರಿಕ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತಿರಬೇಕು ಎಂದು ಇಐಡಿ ಸಕ್ಕರೆ ಕಾರ್ಖಾನೆಯ ಹಿರಿಯ ಅಧಿಕಾರಿ ಗುರುರಾಜ ದೇಶಪಾಂಡೆ ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಆರ್‌ಡಿ ಐಟಿ ಹಳಿಯಾಳದ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ವಿದ್ಯಾರ್ಥಿಗಳಿಗೆ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಇತ್ತೀಚೆಗೆ ಆಯೋಜಿಸಲಾಗಿತ್ತು.

ಈ ವೇಳೆ ಮಾತನಾಡಿದ ಗುರುರಾಜ ದೇಶಪಾಂಡೆ, ಕೈಗಾರಿಕಾ ಕ್ಷೇತ್ರವು ಬಯಸುವ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಸಂಪಾದಿಸಿಕೊಂಡರೆ ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ಪಡೆಯಲು ಸಹಕಾರಿಯಾಗುತ್ತದೆ ಎಂದು ಹೇಳಿದರು. ಕೈಗಾರಿಕಾ ಪ್ರಕ್ರಿಯೆಯ ದಕ್ಷತೆಯನ್ನು ಹೆಚ್ಚಿಸಲು ಬಳಸಲಾಗುತ್ತಿರುವ ನೂತನ ತಂತ್ರಜ್ಞಾನಗಳ ಬಗ್ಗೆ ಅವರು ವಿವರಿಸಿದರು. ವಿಶೇಷವಾಗಿ ಪವರ್ ಫ್ಯಾಕ್ಟರ್ ಸುಧಾರಣೆ, ಶಕ್ತಿ ನಷ್ಟ ತಡೆ ತಂತ್ರಜ್ಞಾನ, ಪಿಎಲ್‌ಸಿ ಮತ್ತು ಸ್ಕ್ಯಾಡಾ ವ್ಯವಸ್ಥೆಗಳ ಉಪಯೋಗ ಕುರಿತು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಮಾಹಿತಿ ನೀಡಿದರು. ವಿಭಾಗ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್ ಆಯೋಜಿಸಿದ್ದರು. ಪ್ರೊ. ರವೀಂದ್ರ ಮೋಟೆಕರ್ ಸಂಯೋಜಿಸಿದ್ದರು. ಐವತ್ತಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಅಚಲ ಆತ್ಮವಿಶ್ವಾಸ ಹಾಗೂ ಸತತ ಪರಿಶ್ರಮದಿಂದ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಝೂಡ್ ಸ್ಕಿಲ್ ಅಪ್ ಸಂಸ್ಥೆಯ ಸಂಸ್ಥಾಪಕ ಲೋಕೇಶ್ ಮಾತುರ್ ಕರೆ ನೀಡಿದರು. ಹಳಿಯಾಳದ ಕೆಎಲ್‌ಎಸ್ ವಿಆರ್‌ಡಿ ಐಟಿಯಲ್ಲಿ ನಡೆದ "ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಮಾರ್ಗದರ್ಶನ" ಕಾರ್ಯಕ್ರಮದಲ್ಲಿ ಅವರು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಉಪನ್ಯಾಸ ನೀಡಿದರು.

ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ಸುಧೀರ್ ಕುಲಕರ್ಣಿ ನಿರೂಪಿಸಿದರು. ಪ್ರೊ. ನವೀನ್ ಹಿರೇಮಠ ಸಂಯೋಜಿಸಿದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಆಶ್ರಯದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ 180ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು ಎಂದು ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದರು.

28.09.2025_Konk...

PDF reader

# ಕೆಎಲ್ಎಸ್ ವಿಡಿಐಟಿಯಲ್ಲಿ ಕೈಗಾರಿಕಾ ಮತ್ತು ವೃತ್ತಿ ಕೌಶಲ್ಯಗಳ ಕಾರ್ಯಕ್ರಮ ಯಶಸ್ವಿ

**ಕೊಂಕಣವಾಹಿನಿ ನ್ಯೂಸ್,**

**ಹಳಿಯಾಳ :** ವಿದ್ಯಾರ್ಥಿಗಳ ಚಿಂತನೆಗಳು ಪಠ್ಯಕ್ರಮಗಳಿಗಷ್ಟೇ ಸೀಮಿತವಾಗಿರದೆ ಕೈಗಾರಿಕಾ ವಲಯದಲ್ಲಿನ ತಾಂತ್ರಿಕ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತಿರಬೇಕು ಎಂದು ಗುರುರಾಜ ದೇಶಪಾಂಡೆ ಹೇಳಿದರು.



ಪಟ್ಟಣದ ಕೆಎಲ್ಎಸ್ ವಿಡಿಐಟಿ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗ ವಿದ್ಯಾರ್ಥಿಗಳಿಗೆ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಗುರುವಾರ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಹಳಿಯಾಳದ ಇ ಐ ಡಿ ಸಕ್ಕರೆ ಕಾರ್ಖಾನೆಯ ಹಿರಿಯ ಅಧಿಕಾರಿ ಗುರುರಾಜ ದೇಶಪಾಂಡೆ ಆಗಮಿಸಿದ್ದರು. ಕೈಗಾರಿಕಾ ವಲಯವು ಬಯಸುವ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಅಗತ್ಯವಾಗಿ ಹೊಂದಿದ್ದರೆ, ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ಗಳಿಸಿಕೊಳ್ಳಲು ಸಹಕಾರಿಯಾಗುವುದೆಂದು ಹೇಳಿದರು. ಕೈಗಾರಿಕಾ ಕ್ಷೇತ್ರದಲ್ಲಿನ ಪ್ರಕ್ರಿಯೆ ದಕ್ಷತೆಯನ್ನು ಹೆಚ್ಚಿಸಲು ಕೈಗೊಳ್ಳುತ್ತಿರುವ ನೂತನ ತಂತ್ರಜ್ಞಾನಗಳ ಕುರಿತಾಗಿ ತಿಳಿಸುತ್ತ, ಎಲೆಕ್ಟ್ರಿಕಲ್ ವಿದ್ಯಾರ್ಥಿಗಳಿಗೆ ಪವರ್ ಫ್ಯಾಕ್ಟರ್ ಸುಧಾರಣೆ, ಅನಗತ್ಯವಾಗಿ ಶಕ್ತಿಯು ಪೋಲಾಗದಂತೆ ತಡೆಯಲು ಇರುವ ತಂತ್ರಜ್ಞಾನಗಳ ಕುರಿತಾಗಿ ಮಾಹಿತಿ ನೀಡಿದರು. ನೂತನ ತಂತ್ರಜ್ಞಾನಗಳಾದ ಪಿ ಎಲ್ ಸಿ ಮತ್ತು ಸ್ಕಾಡಾ ವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿರುವುದರ ಕುರಿತಾಗಿ ವಿವರಿಸಿದರು. ಶುಕ್ರವಾರದಂದು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಮಾರ್ಗದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಈ ಕಾರ್ಯಕ್ರಮಕೆ ಝೆಡ್ ಸ್ಕಿಲ್ ಅಪ್ ಸಂಸ್ಥೆಯ ಸಂಸ್ಥಾಪಕ ಲೋಕೇಶ್ ಮಾತುರ್ ಆಗಮಿಸಿ ಮಾತನಾಡಿ ಅಚಲ ಆತ್ಮವಿಶ್ವಾಸ ಹಾಗೂ ಸತತ ಪರಿಶ್ರಮದಿಂದ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ ಕರೆ ನೀಡಿದರು. ವಿದ್ಯಾರ್ಥಿಗಳು ಶಿಸ್ತು ಬದ್ಧ ಜೀವನವನ್ನು ರೂಪಿಸಿಕೊಳ್ಳುವುದು ಅತ್ಯಗತ್ಯವಾಗಿದ್ದು, ಪರಿಶ್ರಮ ಮನೋಭಾವದಿಂದ ಗುರಿ ಸಾಧಿಸಬೇಕೆಂದು ಹೇಳಿದರು. ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟು, ಗುರಿ ಸಾಧನೆಗೆ ಅಗತ್ಯವಿರುವ ಕೌಶಲ್ಯಗಳನ್ನು ಹೊಂದಬೇಕೆಂದು. ಉತ್ತಮ ಭವಿಷ್ಯ ರೂಪಿಸಲು ಸಹಕಾರಿಯಾಗಿರುವ ತಂದೆ ತಾಯಿಯರನ್ನು ಕಡೆಗಾಣಿಸದಂತೆ ಕಿವಿಮಾತು ಹೇಳಿದರು. ಕೇವಲ ಯಶಸ್ಸಿನ ಕನಸು ಕಾಣುವುದು ಬಿಟ್ಟು, ಕಾರ್ಯ ಸಾಧನೆಗೆ ಸಿದ್ಧತೆ ಮಾಡಿಕೊಳ್ಳಬೇಕೆಂದು ಹೇಳಿದರು.

ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ಸುಧೀರ್ ಕುಲಕರ್ಣಿ ನಿರೂಪಿಸಿದರು. ಪ್ರೊ. ನವೀನ್ ಹಿರೇಮಠ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವತಿಯಿಂದ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ 180ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರೆಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಿಳಿಸಿದ್ದಾರೆ.

# ಕೈಗಾರಿಕಾ, ವೃತ್ತಿ ಕೌಶಲ್ಯಗಳ ಕಾರ್ಯಕ್ರಮ ಯಶಸ್ವಿ

◆ **ಹಳಿಯಾಳ:** ವಿದ್ಯಾರ್ಥಿಗಳ ಚಿಂತನೆಗಳು ಪಠ್ಯಕ್ರಮಗಳಿಗಷ್ಟೇ ಸೀಮಿತವಾಗಿರದೆ ಕೈಗಾರಿಕಾ ವಲಯದಲ್ಲಿನ ತಾಂತ್ರಿಕ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತಿರಬೇಕು ಎಂದು ಗುರುರಾಜ ದೇಶಪಾಂಡೆ ಹೇಳಿದರು.

ಪಟ್ಟಣದ ಕೆಎಲ್ಎಸ್ ವಿಡಿಐಟಿ ಹಳಿಯಾಳದ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗ ವಿದ್ಯಾರ್ಥಿಗಳಿಗೆ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಸೆಪ್ಟೆಂಬರ್ 25ರಂದು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಹಳಿಯಾಳದ ಇಐಡಿ ಸಕ್ಕರೆ ಕಾರ್ಖಾನೆಯ ಹಿರಿಯ ಅಧಿಕಾರಿ ಗುರುರಾಜ ದೇಶಪಾಂಡೆ ಆಗಮಿಸಿದ್ದರು. ಕೈಗಾರಿಕಾ ವಲಯವು ಬಯಸುವ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಅಗತ್ಯವಾಗಿ ಹೊಂದಿದ್ದರೆ, ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ಗಳಿಸಿಕೊಳ್ಳಲು ಸಹಕಾರಿಯಾಗುವುದೆಂದು ಹೇಳಿದರು. ಕೈಗಾರಿಕಾ ಕ್ಷೇತ್ರದಲ್ಲಿನ ಪ್ರಕ್ರಿಯೆ ದಕ್ಷತೆಯನ್ನು ಹೆಚ್ಚಿಸಲು ಕೈಗೊಳ್ಳುತ್ತಿರುವ ನೂತನ ತಂತ್ರಜ್ಞಾನಗಳ ಕುರಿತಾಗಿ ತಿಳಿಸುತ್ತ, ಎಲೆಕ್ಟ್ರಿಕಲ್ ವಿದ್ಯಾರ್ಥಿಗಳಿಗೆ ಪವರ್ ಫ್ಯಾಕ್ಟರ್ ಸುಧಾರಣೆ, ಅನಗತ್ಯವಾಗಿ ಶಕ್ತಿಯು ಪೋಲಾಗದಂತೆ ತಡೆಯಲು ಇರುವ ತಂತ್ರಜ್ಞಾನಗಳ ಕುರಿತಾಗಿ ಮಾಹಿತಿ ನೀಡಿದರು. ನೂತನ ತಂತ್ರಜ್ಞಾನಗಳಾದ ಪಿ ಎಲ್ ಸಿ ಮತ್ತು ಸ್ಕ್ಯಾಡಾ ವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿರುವುದರ ಕುರಿತಾಗಿ ವಿವರಿಸಿದರು. ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ವಿಭಾಗ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ರವೀಂದ್ರ ಮೋಟೆಕರ್ ಸಂಯೋಜಿಸಿದ್ದರು. ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಅಚಲ ಆತ್ಮವಿಶ್ವಾಸ



ಹಾಗೂ ಸತತ ಪರಿಶ್ರಮದಿಂದ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ ಲೋಕೇಶ್ ಮಾಥುರ್ ವಿದ್ಯಾರ್ಥಿಗಳಿಗೆ ಹೇಳಿದರು. ಪಟ್ಟಣದ ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಸೆಪ್ಟೆಂಬರ್ 26ರಂದು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಮಾರ್ಗದರ್ಶನ ಕಾರ್ಯಕ್ರಮವನ್ನುಹಮ್ಮಿಕೊಳ್ಳಲಾಗಿತ್ತು.ಸಂಪನ್ಮೂಲ ವ್ಯಕ್ತಿಯಾಗಿ ಈ ಕಾರ್ಯಕ್ರಮಕ್ಕೆ ಝೆುಡ್ ಸ್ಕಿಲ್ ಅಪ್ ಸಂಸ್ಥೆಯ ಸಂಸ್ಥಾಪಕ ಲೋಕೇಶ್ ಮಾತುರ್ ಆಗಮಿಸಿದ್ದರು. ವಿದ್ಯಾರ್ಥಿಗಳು ಶಿಸ್ತು ಬದ್ಧ ಜೀವನವನ್ನು ರೂಪಿಸಿಕೊಳ್ಳುವುದು ಅತ್ಯಗತ್ಯವಾಗಿದ್ದು, ಪರಿಶ್ರಮ ಮನೋಭಾವದಿಂದ ಗುರಿ ಸಾಧಿಸಬೇಕೆಂದು ಹೇಳಿದರು. ತಮ್ಮ ಸಾಮರ್ಥ್ಯದಮೇಲೆನಂಬಿಕೆಇಟ್ಟು, ಗುರಿಸಾಧನೆಗೆ ಅಗತ್ಯವಿರುವ ಕೌಶಲ್ಯಗಳನ್ನು ಹೊಂದಬೇಕು. ಉತ್ತಮ ಭವಿಷ್ಯ ರೂಪಿಸಲು ಸಹಕಾರಿಯಾಗಿರುವ ತಂದೆ ತಾಯಿಯರನ್ನು ಕಡೆಗಾಣಿಸದಂತೆ ಕಿವಿಮಾತು ಹೇಳಿದರು. ಕೇವಲ ಯಶಸ್ಸಿನ ಕನಸು ಕಾಣುವುದು ಬಿಟ್ಟು, ಕಾರ್ಯ ಸಾಧನೆಗೆ ಸಿದ್ಧತೆ ಮಾಡಿಕೊಳ್ಳಬೇಕೆಂದು ಹೇಳಿದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ಸುಧೀರ್ ಕುಲಕರ್ಣಿ ನಿರೂಪಿಸಿದರು. ಪ್ರೊ. ನವೀನ್ ಹಿರೇಮಠ ಸಂಯೋಜಿಸಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವತಿಯಿಂದ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ 180ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರೆಂದು ಪ್ರಾಚಾರ್ಯ ಡಾ. ವಿ.ಎ ಕುಲಕರ್ಣಿ ತಿಳಿಸಿದ್ದಾರೆ.